**ದಿನಾಂಕಃ 23.10.2024 ರಂದು ಪ್ರಮಾಣವಚನ ಬೋಧಿಸಲಾಯಿತು.**

**ಃಃ ಮುಖ್ಯ ವಿಚಾರಣೆ ಃ ವಾದಿ ಪರ ಶ್ರೀ. ಎಸ್ ಕೆ ವಕೀಲರಿಂದ ಃಃ**

ನಾನು ಮುಖ್ಯ ವಿಚಾರಣೆಯನ್ನು ಪ್ರಮಾಣಪತ್ರದ ಮೂಲಕ ಸಲ್ಲಿಸುತ್ತಿದ್ದು, ಪ್ರಮಾಣಪತ್ರದಲ್ಲಿ ಹೇಳಿರುವ ಸಂಗತಿಗಳೆಲ್ಲವೂ ಸತ್ಯವಾಗಿದೆ ಎಂದು ಪ್ರಮಾಣೀಕರಿಸುತ್ತೇನೆ. ಪ್ರಮಾಣಪತ್ರವನ್ನು ನಾನು ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ಸದರಿ ಪ್ರಕರಣದಲ್ಲಿ ನಾನು ಹಾಜರುಪಡಿಸಿರುವ ದಾಖಲೆಗಳನ್ನು ಈಗ ನೋಡುತ್ತಿದ್ದೇನೆ, ಅವುಗಳನ್ನು ಈ ಕೆಳಕಂಡಂತೆ ಗುರುತಿಸಲಾಯಿತು.

1. ಜಿ ಪಿ ಎ ಹಾಜರುಪಡಿಸಿದ್ದು ಅದನ್ನು ನಿಪಿ-1
2. ಹಕ್ಕುಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-2
3. ದಿನಾಂಕಃ 14.07.2020 ರ ದಾನಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-3
4. ಇ-ಸ್ವತ್ತು ಮತ್ತು ನಮೂನೆ 9 ಮತ್ತು 11 ರ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-4
5. ಸ್ವೀಕೃತಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-5
6. 2011 ನೇ ಇಸವಿ 3 ನೇ ತಿಂಗಳು 13 ನೇ ತಾರೀಖಿನ ತಹನಾಮೆಯನ್ನು ಹಾಜರುಪಡಿಸಿದ್ದು (ಸದರಿ ದಾಖಲೆಯನ್ನು ನಿಶಾನೆಯಾಗಿ ಗುರುತಿಸಲು ಪ್ರತಿವಾದಿ ಪರ ವಕೀಲರು ಶ್ರೀ. ಹೆಚ್ ಎ ಎಸ್ ವಕೀಲರು ಸರಿಯಾದ ಛಾಪಾ ಕಾಗದದ ಮೇಲೆ ಮತ್ತು ಸ್ಟಾಂಪ್ ಶುಲ್ಕವನ್ನು ಪಾವತಿಸಿಲ್ಲದ ಕಾರಣ ಅದನ್ನು ನಿಶಾನೆಯಾಗಿ ಗುರುತಿಸಲು ಬರುವುದಿಲ್ಲ ಎಂದು ತಕರಾರು ಹೇಳಿರುತ್ತಾರೆ) ತಕರಾರಿಗೆ ಒಳಪಟ್ಟು ಸದರಿ ದಾಖಲೆಯನ್ನು ನಿಪಿ-6 ಎಂದು ಗುರುತಿಸಲಾಗಿರುತ್ತದೆ.
7. ಸಾಕ್ಷಿಯು ಸದರಿ ನಿಪಿ-6 ರಲ್ಲಿ ಕಲಾವತಿ ರವರ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-6(ಎ) ಎಂದು ಗುರುತಿಸಲಾಯಿತು.

ಆದುದರಿಂದ ದಾವೆಯಲ್ಲಿ ಕೋರಿಕೊಂಡಂತೆ ದಾವೆಯನ್ನು ಡಿಕ್ರಿ ಮಾಡಿಕೊಡಬೇಕೆಂದು ಕೋರಿಕೊಳ್ಳುತ್ತೇನೆ.

**ಪಾಟೀ ಸವಾಲು ಃ ಪ್ರತಿವಾದಿಗಳ ಪರ ಶ್ರೀ. ಹೆಚ್ ಎ ಎಸ್ ವಕೀಲರಿಂದಃ**

ಸಮಯ ಕೋರಿದ್ದು, ಸಮಯ ನೀಡಿ ಮುಂದೂಡಲಾಯಿತು.

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸ ಇ ಎ ಒ**

**ಪ್ರ.ದ.ನ್ಯಾದಂಃ ನ.ರಾ.ಪುರ.**

ಸಾಕ್ಷಿ ಸಹಿಃ